## ಕರ್ನಾಟಕ ವಿಧಾನ ಪರಿಷತ್ತು

1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1102

2] ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3] ಉತ್ತರಿಸುವ ದಿನಾಂಕ : 22/09/2022

4] ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಒಂದು ಹೊಸದಾಗಿ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರದಲ್ಲಿರುವ ಮಾನದಂಡಗಳೇನು; | ರಾಷ್ಟ್ರೀಯ ಪೊಲೀಸ್ ಆಯೋಗದ ಮಾನದಂಡಗಳನ್ವಯ ಹೊಸದಾಗಿ ಪೊಲೀಸ್ ಠಾಣೆಯನ್ನು ತೆರೆಯಲು ವಿಸ್ತೀರ್ಣ: 150 ಚ.ಕಿ.ಮೀ., ಜನಸಂಖ್ಯೆ: 50,000 ರಿಂದ 60,000, ಅಪರಾಧ ಪ್ರಕರಣಗಳು: ವಾರ್ಷಿಕ 300ಕ್ಕಿಂತ ಹೆಚ್ಚು ಅಪರಾಧ ಪ್ರಕರಣಗಳು ದಾಖಲಾಗಿರಬೇಕು. |
| ಆ) | ಕೈಗಾರಿಕಾ ಪ್ರದೇಶಗಳಲ್ಲಿ ಪೊಲೀಸ್ ಠಾಣೆಯನ್ನು ಸ್ಥಾಪಿಸಲು ಇರುವ ಮಾನದಂಡಗಳಾವುವು; | ಕೈಗಾರಿಕಾ ಪ್ರದೇಶಗಳಲ್ಲಿ ಪೊಲೀಸ್ ಠಾಣೆಯನ್ನು ಸ್ಥಾಪಿಸಲು ಪ್ರತ್ಯೇಕವಾಗಿ ಯಾವುದೇ ಮಾನದಂಡಗಳಿರುವುದಿಲ್ಲ ಮತ್ತು ರಾಷ್ಟ್ರೀಯ ಪೊಲೀಸ್ ಆಯೋಗವು ನಿಗಧಿಪಡಿಸಿರುವ ಮಾನದಂಡಗಳೇ ಅನ್ವಯವಾಗುವುದು. |
| ಇ) | ಶಿವಮೊಗ್ಗ ತಾಲ್ಲೂಕು ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಪೊಲೀಸ್ ಠಾಣೆಯನ್ನು ತೆರೆಯಲು ಈಗಾಗಲೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಮಾಹಿತಿ ನೀಡುವುದು; | ಶಿವಮೊಗ್ಗ ತಾಲ್ಲೂಕು ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಪೊಲೀಸ್ ಠಾಣೆಯನ್ನು ತೆರೆಯುವ ಕುರಿತು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಈ) | ಶಿವಮೊಗ್ಗ ತಾಲ್ಲೂಕು ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಪೊಲೀಸ್ ಠಾಣೆಯನ್ನು ತೆರೆಯುವ ಬಗ್ಗೆ ಸರ್ಕಾರದ ನಿಲುವೇನು? | |

**ಸಂಖ್ಯೆ: ಹೆಚ್‌ಡಿ 147 ಪಿಓಪಿ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು.